ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 65/2013

(ಫ್ರಾಸಾ-9 ಚಾಸಾ-7)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 04.08.2025

| | | |
|---|---|---|
| ಸಾಕ್ಷಿದಾರರ ಹೆಸರು | - | ಸುಬ್ರಮಣಿ |
| ತಂದೆಯ ಹೆಸರು | - | ಜಯರಾಮಯ್ಯ |
| ವಯಸ್ಸು | - | 48 ವರ್ಷ, |
| ಉದ್ಯೋಗ | - | ಗಾರೆ ಕೆಲಸ |
| ವಾಸ | - | ಕೋಣನಕುಂಟೆ ಕ್ರಾಸ್ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ಪಂಚನಾಮೆ ಇದ್ದು ಅದನ್ನು ನಿಶಾನೆ ಪಿ-1 ಎಂದು ಹಾಗೂ ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-1(ಸಿ) ಎಂದು ಗುರುತಿಸಲಾಯಿತು. ನಿಪಿ-1 ಕ್ಕೆ ಪೋಲಿಸರು ಸಹಿ ಪಡೆದಿರುತ್ತಾರೆ. ನಿಶಾನೆ ಪಿ-1 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಯಾವ ಕಾರಣಕ್ಕೆ ಹಾಗೂ ಎಲ್ಲಿ ಸಹಿ ಪಡೆದಿರುತ್ತಾರೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಹೇಳಿಕೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

2. ದಿಃ03.09.2012 ರಂದು ಪೋಲಿಸರು ಚಾಸಾ-3 ತೋರಿಸಿದ ಕೃತ್ಯ ನಡೆದ ಸ್ಥಳವಾದ ತಲಘಟ್ಟಪುರದ ಎಂ ಎಸ್ ವೈನ್ ಸ್ಟೋನ್ಸ್ ಮುಂದೆ ಗಲಾಟೆ ವಿಚಾರವಾಗಿ ನಿಶಾನೆ ಪಿ-1 ರಂತೆ ಸ್ಥಳ ಪಂಚನಾಮೆಯನ್ನು ನನ್ನ ಹಾಗೂ ಚಾಸಾ-3 ಮತ್ತು 6 ರವರ ಸಮಕ್ಷಮ ಸಂಜೆ 06.45 ರಿಂದ 07.45 ರವರೆಗೆ ಜರುಗಿಸಿ ಅದರಲ್ಲಿ ಬರೆದಿರುವ ವಿಷಯಗಳನ್ನು

ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆ ಪಿ-1 ರಂತೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದ್ದರೂ ಸಹ ಆರೋಪಿತರ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಎ ವಕೀಲರಿಂದಃ</u>**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಢೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು